<u>1ನೇ ಅಪರ ಮುಖ್ಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ</u>
<u>ಬೆಂಗಳೂರು ನಗರ</u>

ಸಿ.ಸಿ. ನಂ. 4319-2021

ಸಿಡಬ್ಲೂ - 2ಪಿಡಬ್ಲೂ-2

ಸಾಕ್ಷಿದಾರರ ಹೆಸರು : ಇಮ್ಯಾನೂಲ್
ತಂದೆಯ ಹೆಸರು : ಜೇಸುದಾಸ್
ವಯಸ್ಸು : 38 ವರ್ಷ
ಕೆಲಸ : ಖಾಸಗಿ ಕೆಲಸ
ವಾಸ : ಬೆಂಗಳೂರು

<u>ಸಾಕ್ಷಿಯನ್ನು ದಿನಾಂಕಃ 30-10-2025 ರಂದು ಕರೆಸಿ ಪ್ರಮಾಣ ಮಾಡಿಸಲಾಯಿತು.</u>
<u>ಮುಖ್ಯ ವಿಚಾರಣೆ ಹಿ.ಸ.ಸಾ.ಅ. ರವರಿಂದಃ</u>

ನನಗೆ ಚಾಸಾ 3, 9 ರವರು ಗೊತ್ತು. ಸಾಕ್ಷಿಯು ನಿಪಿ.4 ರಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ.4ಬಿ ಎಂದು ಗುರುತಿಸಲಾಯಿತು. ದಿ. 27-08-2019 ರಂದು ಕನ್ನಿಂಗ್ ಹ್ಯಾಮ ರಸ್ತೆಯಲ್ಲಿ ನಾನು ಮತ್ತು ಚಾಸಾ 3 ರವರು ಹೋಗುತ್ತಿದ್ದಾಗ ಒಂದು ಕಟ್ಟಡದಿಂದ ಬಬ್ಲೂ ಎಂಬ ಹುಡುಗ 8 ನೇ ಮಹಡಿಯಿಂದ 3 ನೇ ಮಹಡಿಗೆ ಬಿದ್ದು ಗಾಯವಾಗಿದ್ದು ಆತನನ್ನು ಆಸ್ಪತ್ರೆಗೆ ದಾಖಲು ಮಾಡಿರುತ್ತಾರೆ. ಈ ವಿಚಾರವಾಗಿ ನನ್ನ ಮತ್ತು ಚಾಸಾ 3 ರವರ ಸಹಿಗಳನ್ನು ಪಡೆದಿರುತ್ತಾರೆ.

(ಈ ಹಂತದಲ್ಲಿ ಸಾಕ್ಷಿದಾರರು ಭಾಗಶಃ ಪ್ರತಿಕೂಲ ಸಾಕ್ಷಿ ನುಡಿದಿದ್ದರಿಂದ, ಹಿ.ಸ.ಸಾ.ಅ. ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿದಾರರೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು)

<u>ಪಾಟೀ ಸವಾಲು ಹಿ.ಸ.ಸಾ.ಅ. ರವರಿಂದಃ</u>

ನನ್ನ ಜೊತೆ ಚಾಸಾ 9 ರವರು ಸಹಿ ಮಾಡಿರುತ್ತಾರೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲು ಆರೋಪಿತರ ಪರ ವಕೀಲರಿಂದಃ</u>

ಕಟ್ಟಡ ಯಾರಿಗೆ ಸೇರಿದ್ದು ಎಂದು ನನಗೆ ಗೊತ್ತಿಲ್ಲ. ಪೊಲೀಸರು ನಮ್ಮನ್ನು ಕರೆದು ಸಹಿ ಮಾಡಿತಿಸಿರುತ್ತಾರೆ. ಘಟನಾ ಸ್ಥಳದಲ್ಲಿ ಶಬ್ದ ಕೇಳಿದ್ದು ನಾವು ಅಲ್ಲಿಗೆ ಹೋಗಿರುತ್ತೇವೆ. ಮುಂಜಾಗ್ರತೆ ಕ್ರಮವಾಗಿ ಕೊಟ್ಟ ಹೆಲ್ಮೆಟ್ ನ್ನು ನಾನು ನೋಡಿಲ್ಲ.

ಪೊಲೀಸರು ಹೇಳಿ ಕೊಟ್ಟ ಹಾಗೇ ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಮರುವಿಚಾರಣೆಃ ಇಲ್ಲ</u>

(ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು. ಸಾಕ್ಷಿಯ ಎದುರಿನಲ್ಲಿ ಓದಿ ಹೇಳಿದ ಮೇಲೆ ಸರಿ ಇದೆ ಎಂದು ಒಪ್ಪಿ ಸಹಿ ಮಾಡಲಾಯಿತು.)

ಓ ಹೇ ಕೇ ಸ ಇ ಒ

1 ನೇ ಅ. ಮು. ನ್ಯಾ.ದಂ. ನ್ಯಾ